# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 752 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 13.07.2023 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಮದ್ಯ ಮಾರಾಟದ ಮಳಿಗೆಗಳಿವೆ; ಯಾವ ಯಾವ ತರಹದ ಮಳಿಗೆಗಳಿಗೆ ಲೈಸೆನ್ಸ್ ನೀಡಲಾಗಿದೆ; | 2022-23ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯಲ್ಲಿ ಒಟ್ಟು 250 ಸನ್ನದುಗಳು ಕಾರ್ಯನಿರ್ವಹಿಸುತ್ತಿದ್ದು, ಸನ್ನದುಗಳ ವಿವರ ಕೆಳಕಂಡಂತಿದೆ. |

| ಕ್ರ.ಸಂ | ಸನ್ನದುಗಳು | ಸಂಖ್ಯೆ |
|---|---|---|
| 1 | ಸಿಎಲ್-2 | 90 |
| 2 | ಸಿಎಲ್-4 | 21 |
| 3 | ಸಿಎಲ್-7 | 47 |
| 4 | ಸಿಎಲ್-15 | 01 |
| 5 | ಸಿಎಲ್-8 | 01 |
| 6 | ಸಿಎಲ್-9 | 41 |
| 7 | ಸಿಎಲ್-11ಸಿ | 42 |
| 8 | ವೈನ್ ಟಾವರಿನ್ | 04 |
| 9 | ವೈನ್ ಬೋಟಿಕ್ | 03 |
| ಒಟ್ಟು | | 250 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಲೈಸೆನ್ಸ್ ಪಡೆಯಲು ಇರುವ ನಿಮಯಮಗಳೇನು? (ಎಂ.ಎಸ್.ಐ.ಎಲ್. ವತಿಯಿಂದ ಎಷ್ಟು ಮಳಿಗೆಗಳಿವೆ? (ವಿವರ | 1992ನೇ ಸಾಲಿನಿಂದ ಹೊಸದಾಗಿ ಸಿಎಲ್-2, ಸಿಎಲ್-9 ಸನ್ನದನ್ನು ನೀಡಲು ನಿರ್ಬಂಧವಿರುವುದರಿಂದ ಅಬಕಾರಿ ಇಲಾಖೆಯಿಂದ ಯಾವುದೇ ಹೊಸ ಸಿಎಲ್-2 ಮತ್ತು ಸಿಎಲ್-9 ಸನ್ನದಿಗೆ ಮಂಜೂರಾತಿ ನೀಡಲಾಗುತ್ತಿಲ್ಲ.<br><br>ಸಿಎಲ್-4, ಸಿಎಲ್-6ಎ, ಸಿಎಲ್-7, ಸಿಎಲ್-8, ಸಿಎಲ್-7ಎ, ಸಿಎಲ್-11ಸಿ, ಫಾರ್ಮ್ ಸಿಎಲ್-16, ಫಾರ್ಮ್ ಸಿಎಲ್-17 ಮತ್ತು |

| | | |
|---|---|---|
| | ನೀಡುವುದು) | ಫಾರ್ಮ್ ಸಿಎಲ್–18 ಸನ್ನದುಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968 ರ ನಿಯಮ–3(11–ಸಿ), 8, 8(ಎ) ರಲ್ಲಿ ನಿಗಧಿಪಡಿಸಿರುವ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕ ಹಾಗೂ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ–5 ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು (30 ಬೆಡ್‌ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಕಾಲೋನಿಗಳು ಇರುವಂತಿಲ್ಲ. ಸ್ಥಳೀಯ ಸಂಸ್ಥೆಗಳು, ಹಾಗೂ ಪತ್ರಾಂಕಿತ ಅಧಿಕಾರಿಗಳ ಕೇಂದ್ರ/ರಾಜ್ಯ ಸರ್ಕಾರಿ ಕಛೇರಿಗಳು ಇರುವಂತಿಲ್ಲ. ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ:12164–12166/2016ರ ದಿನಾಂಕ:31–03–2017ರಲ್ಲಿ ಆದೇಶಿಸಿದಂತೆ 20,000ಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 500 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ. 20,000ಕ್ಕಿಂತ ಕಡಿಮೆ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 220 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ (ಸಿವಿಲ್) ಸಂಖ್ಯೆ:10243/2017ರಲ್ಲಿನ ದಿನಾಂಕ: 11.07.2017ರ ಆದೇಶದಲ್ಲಿ ನೀಡಿದ ಸ್ಪಷ್ಟೀಕರಣದಂತೆ, ಮಹಾನಗರ ಪಾಲಿಕೆ, ನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾದು ಹೋಗುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಸನ್ನದುಗಳನ್ನು ನಿಯಮಾನುಸಾರ ನವೀಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ:ಆಇ 36 ಇಡಬ್ಲ್ಯೂಪಿ 2018, ದಿನಾಂಕ:06.08.2020ರಲ್ಲಿ 2011ರ ಜನಗಣತಿಯನ್ವಯ 5000 ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆಯುಳ್ಳ ಗ್ರಾಮ ಪಂಚಾಯತಿ / |

| | | |
|---|---|---|
| | | ಸ್ಥಳೀಯ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಹೊಸದಾಗಿ ಸಿಎಲ್-6ಎ ಮತ್ತು ಸಿಎಲ್-7 ಸನ್ನದುಗಳಿಗೆ ಮಾತ್ರ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ (5)ರಡಿಯಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿಬಂಧನೆಗಳನ್ನು ಹೊರತುಪಡಿಸಿ, ಇತರೆ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ನಿಯಮಾನುಸಾರ ಪ್ರಾರಂಭಿಸಲು ವಿನಾಯಿತಿಯನ್ನು ನೀಡಲಾಗಿದೆ.<br><br>ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ:ಆಇ 33 ಇಎಫ್‌ಎಲ್ 2021, ದಿನಾಂಕ:19.01.2022ರಲ್ಲಿ ಸರ್ಕಾರದ ರಾಜಸ್ವ ಹಿತದೃಷ್ಟಿಯಿಂದ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಹೊಸದಾಗಿ ಮಂಜೂರು ಮಾಡುವ ಸಿಎಲ್-7(ಎ) ಸನ್ನದುಗಳಿಗೂ ವಿಸ್ತರಿಸಿ ಅನುಮತಿಯನ್ನು ನೀಡಲಾಗಿದೆ.<br><br>ರಾಜ್ಯದಲ್ಲಿ ಎಂ.ಎಸ್.ಐ.ಎಲ್ ಸನ್ನದುಗಳನ್ನು ಮಂಜೂರು ಮಾಡಲು ಸರ್ಕಾರ ಅನುಸರಿಸುವ ಮಾರ್ಗಸೂಚಿಗಳು ಕೆಳಕಂಡಂತಿವೆ:<br><br>i. ಎಂ.ಎಸ್.ಐ.ಎಲ್ ಮಳಿಗೆಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968 ರ ನಿಯಮ-3(11-ಸಿ), 8, 8(ಎ) ಹಾಗೂ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ-5ರ ಪ್ರಕಾರ ನಿಬಂಧನೆಗಳನ್ನು ಪಾಲಿಸಿ ಮಂಜೂರು ಮಾಡಲು ಪೂರ್ವಾನುಮತಿ ನೀಡಲಾಗುವುದು.<br><br>ii. ಸರ್ಕಾರದ ಪತ್ರ ಸಂಖ್ಯೆ:ಎಫ್‌ಡಿ 07 ಇಎಫ್‌ಎಲ್ 2008 ದಿನಾಂಕ: 03.07.2009 ರಲ್ಲಿ ಪ್ರತಿ ತಾಲ್ಲೂಕಿಗೆ ಕನಿಷ್ಠ 2 ರಂತೆ 352 ಸನ್ನದುಗಳು, ಜಿಲ್ಲಾ ಕೇಂದ್ರಸ್ಥಾನಕ್ಕೆ 2 ರಂತೆ 58 ಸನ್ನದುಗಳು ಹಾಗೂ ಎಂಎಸ್‌ಐಎಲ್ ಸಂಸ್ಥೆ ಪ್ರಾದೇಶಿಕ ಬೇಡಿಕೆ ಅಧ್ಯಯನ ಆಧರಿಸಿ ಕೋರಿಕೆ ಸಲ್ಲಿಸುವ ಸ್ಥಳಗಳಿಗೆ 53 |

| | | |
|---|---|---|
| | | ಸನ್ನದುಗಳಂತೆ ಒಟ್ಟು 463 ಸನ್ನದುಗಳನ್ನು ಹಂಚಿಕೆ ಮಾಡಲಾಗಿದೆ.<br><br>iii. ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಎಫ್‌ಡಿ 15 ಇಎಫ್‌ಎಲ್ 2015 ದಿ:23.09.2016 ರಾಜ್ಯದ 220 ವಿಧಾನ ಸಭಾ ಕ್ಷೇತ್ರಗಳಿಗೆ ಪ್ರತಿ ಕ್ಷೇತ್ರಕ್ಕೆ 4 ಸನ್ನದುಗಳಂತೆ ಒಟ್ಟು 880, ಯಾದಗಿರಿ ಜಿಲ್ಲೆಯ ನಾಲ್ಕೂ ವಿಧಾನ ಸಭಾ ಕ್ಷೇತ್ರಗಳಿಗೆ ತಲಾ 5 ರಂತೆ ಒಟ್ಟು 20, ಹೀಗೆ ರಾಜ್ಯದಲ್ಲಿ ಒಟ್ಟಾರೆ 900 ಸಿಎಲ್ 11–ಸಿ ಸನ್ನದುಗಳನ್ನು ಕೆಳಕಂಡ ಷರತ್ತುಗಳನ್ನು ವಿಧಿಸಿ ಎಂ.ಎಸ್.ಐ.ಎಲ್ ಸಂಸ್ಥೆಗೆ ಮಂಜೂರಾತಿ ನೀಡಲಾಗಿರುತ್ತದೆ.<br><br>• ಎಂ.ಎಸ್.ಐ.ಎಲ್ ಸಂಸ್ಥೆಯೇ ತನ್ನ ವಾಣಿಜ್ಯ ಕಾರ್ಯಸಾಧ್ಯತೆಗೆ ಅನುಗುಣವಾಗಿ ಸನ್ನದುಗಳ ಸ್ಥಳವನ್ನು ನಿಗಧಿಗೊಳಿಸುವುದು. ಎಂ.ಎಸ್.ಐ.ಎಲ್ ಸಂಸ್ಥೆಯ ಅಧಿಕಾರಿಗಳು ಕರ್ನಾಟಕ ಅಬಕಾರಿ ಕಾಯ್ದೆಯನ್ವಯ ಮದ್ಯದಂಗಡಿಗಳನ್ನು ತೆರೆಯುವ ನಿರ್ದಿಷ್ಟ ಸ್ಥಳಗಳನ್ನು ಗುರುತಿಸುವುದು.<br><br>• ಈ ರೀತಿ ಗುರುತಿಸುವ ಸ್ಥಳಗಳು ಸರ್ಕಾರವು ತಿಳಿಸಿರುವ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲೇ ಇರಬೇಕು ಹಾಗೂ ನಿಗದಿಪಡಿಸಿರುವ ಸಂಖ್ಯೆಯ ಮಿತಿಯಲ್ಲೇ ಇರಬೇಕು.<br><br>• ಒಂದು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಿಂದ ಮತ್ತೊಂದು ವಿಧಾನಸಭಾ ಕ್ಷೇತ ವ್ಯಾಪ್ತಿಗೆ ವರ್ಗಾವಣೆ ಆಗದಂತೆ ನೋಡಿಕೊಳ್ಳತಕ್ಕದ್ದು.<br><br>• ಎಂ.ಎಸ್.ಐ.ಎಲ್ ಸಂಸ್ಥೆಯಿಂದ ಸನ್ನದು ಸ್ಥಳಗಳನ್ನು ಗುರುತಿಸಿ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ ನಂತರ ಅಂತಹ ಸನ್ನದು ಸ್ಥಳಗಳು ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಆಕ್ಷೇಪಣಾ ರಹಿತ ಸ್ಥಳದಲ್ಲಿರುವಂತೆ ಹಾಗೂ ಇತರೆ ಸಂಬಂಧಿಸಿದ ನಿಯಮಗಳಿಗೆ ಪೂರಕವಾಗಿರುವಂತೆ ಸಂಬಂಧಪಟ್ಟ ಅಬಕಾರಿ ಉಪ ಆಯುಕ್ತರು |

| | | |
|---|---|---|
| | | ನೋಡಿಕೊಳ್ಳುವುದು.<br><br>ರಾಜ್ಯದಲ್ಲಿ ಒಟ್ಟು 1105 ಸಿ.ಎಲ್–11ಸಿ ಸನ್ನದುಗಳಿಗೆ ಪೂರ್ವಾನುಮತಿ ನೀಡಲಾಗಿದ್ದು, ವಿಜಯಪುರ ಜಿಲ್ಲೆಯಲ್ಲಿ ಒಟ್ಟು 42 ಸಿ.ಎಲ್–11ಸಿ ಸನ್ನದುಗಳು ಕಾರ್ಯನಿರ್ವಹಿಸುತ್ತಿವೆ. |

**ಆಇ 44 ಇಎಲ್‌ಕ್ಯೂ 2023**

(ಆರ್.ಬಿ.ತಿಮ್ಮಾಪುರ)

ಅಬಕಾರಿ ಸಚಿವರು